ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 212 ಯುಆರ್‌ಸಿ 2012

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 11-12-2012.

ಇಂದ
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು - 560 001.

ಇವರಿಗೆ
ಕುಲಸಚಿವರು,
ರಾಣಿ ಚನ್ನಮ್ಮ ವಿಶ್ವವಿದ್ಯಾಲಯ,
ಬೆಳಗಾವಿ.

ಮಾನ್ಯರೆ,

ವಿಷಯ:- 2012-13ನೇ ಶೈಕ್ಷಣಿಕ ಸಾಲಿನಿಂದ ಎಸ್.ಆರ್.ಕಂಠಿ ಶಿಕ್ಷಣ ಮಹಾವಿದ್ಯಾಲಯ, ಇಳಕಲ್ಲ, ಹುನಗುಂದ ತಾಲ್ಲೂಕು, ಬಾಗಲಕೋಟೆ ಜಿಲ್ಲೆ, ಇಲ್ಲಿನ ಬಿ.ಇಡಿ. ಕೋರ್ಸಿಗೆ ಶಾಶ್ವತ ಸಂಯೋಜನೆಯನ್ನು ಮುಂದುವರೆಸುವ ಬಗ್ಗೆ.

ಉಲ್ಲೇಖ:- 1) ತಮ್ಮ ಪತ್ರ ಸಂಖ್ಯೆ: ರಾಚವಿ/ಬೆಳಗಾವಿ/ಸಿಡಿಸಿ ವಿಭಾಗ/28/6, ದಿ: 18-4-2012.
2) ತಮ್ಮ ಪತ್ರ ಸಂಖ್ಯೆ:ರಾಚವಿ/ಬೆಳಗಾವಿ, ದಿ: 24-9-2012.

---

2012-13ನೇ ಶೈಕ್ಷಣಿಕ ಸಾಲಿನಿಂದ ಎಸ್.ಆರ್.ಕಂಠಿ ಶಿಕ್ಷಣ ಮಹಾವಿದ್ಯಾಲಯ, ಇಳಕಲ್ಲ, ಹುನಗುಂದ ತಾಲ್ಲೂಕು, ಬಾಗಲಕೋಟೆ ಜಿಲ್ಲೆ, ಇಲ್ಲಿ ಅಸ್ತಿತ್ವದಲ್ಲಿರುವ ಬಿ.ಇಡಿ. ಕೋರ್ಸಿಗೆ ಶಾಶ್ವತ ಸಂಯೋಜನೆಯನ್ನು 100 ವಿದ್ಯಾರ್ಥಿ ಪ್ರಮಾಣದೊಂದಿಗೆ ಮುಂದುವರೆಸುವ ವಿಚಾರವನ್ನು ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಆಧರಿಸಿ ಶೈಕ್ಷಣಿಕ ಪರಿಷತ್ತು ಮತ್ತು ಸಿಂಡಿಕೇಟುಗಳು ಮಾಡಿರುವ ಶಿಫಾರಸ್ಸಿನ ಬೆಳಕಿನಲ್ಲಿ ಸಂವೀಕ್ಷಿಸಲಾಗಿದೆ.

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000 ಪ್ರಕರಣ 62(1) ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ **2012-13ನೇ ಶೈಕ್ಷಣಿಕ ಸಾಲಿನಿಂದ ಎಸ್.ಆರ್.ಕಂಠಿ ಶಿಕ್ಷಣ ಮಹಾವಿದ್ಯಾಲಯ, ಇಳಕಲ್ಲ, ಹುನಗುಂದ ತಾಲ್ಲೂಕು, ಬಾಗಲಕೋಟೆ ಜಿಲ್ಲೆ, ಇಲ್ಲಿ ಅಸ್ತಿತ್ವದಲ್ಲಿರುವ ಬಿ.ಇಡಿ. ಕೋರ್ಸಿಗೆ ನ್ಯಾಕ್‌ನಿಂದ ಮಾನ್ಯತೆ ಪಡೆಯುವ ಷರತ್ತಿಗೊಳಪಟ್ಟು ಶಾಶ್ವತ ಸಂಯೋಜನೆಯನ್ನು 100 (ಒಂದು ನೂರು) ವಿದ್ಯಾರ್ಥಿ ಪ್ರಮಾಣದೊಂದಿಗೆ** ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಶಾಶ್ವತ ಸಂಯೋಜನೆಯನ್ನು ಮುಂದುವರೆಸುವಂತೆ ಶಿಫಾರಸ್ಸು ಮಾಡಲು ನಿರ್ದೇಶಿತನಾಗಿದ್ದೇನೆ.

ಷರತ್ತುಗಳು:-

1) ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;
2) ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;

..2..

Scanned by CamScanner

3) ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;

4) ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;

5) ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.

6) ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು. ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.

7) ದಿನಾಂಕ: 13–8–1997 ರಂದು ವಿಶಾಖ v/s ರಾಜಸ್ತಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು.

8) ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಲಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು.

9) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;

10) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ.

11) ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ.

12) ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ತಮ್ಮ ನಂಬುಗೆಯ,

(ಪ್ರಕಾಶ್‌ರಾವ್ ಕೇಸರ್‌ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯಗಳು).

ಪ್ರತಿ:–

1. ಕಾಲೇಜು ಶಿಕ್ಷಣ ಆಯುಕ್ತರು/ನಿರ್ದೇಶಕರು, ಬೆಂಗಳೂರು – 560 001.
2. ಕಾಲೇಜು ಶಿಕ್ಷಣ ಪ್ರಾದೇಶಿಕ ಜಂಟಿ ನಿರ್ದೇಶಕರು, ಧಾರವಾಡ.
3. ಪ್ರಾಂಶುಪಾಲರು, ಎಸ್.ಆರ್.ಕಂಠಿ ಶಿಕ್ಷಣ ಮಹಾವಿದ್ಯಾಲಯ, ಇಳಕಲ್ಲ, ಹುನಗುಂದ ತಾಲ್ಲೂಕು, ಬಾಗಲಕೋಟೆ ಜಿಲ್ಲೆ.

200
24.12.2012

Scanned by CamScanner